**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಸಿಎಸ್(2)/2018

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 29.09.2018.

**ಸುತ್ತೋಲೆ**

ವಿಷಯ : 2018 ರ ನವೆಂಬರ್/ಡಿಸಂಬರ್ ಸೆಮಿಸ್ಟರ್ ಪರೀಕ್ಷೆಯ ಕ್ಯಾಂಡಿಡೇಟ್ ಲಿಸ್ಟ್ ಅನ್ನು ಅಪ್‌ಡೇಟ್ ಮಾಡುವ ಬಗ್ಗೆ.

ಉಲ್ಲೇಖ :
1. ಸರ್ಕಾರದ ಆದೇಶ ಸಂಖ್ಯೆ: ಇಡಿ 178 ಟಿಪಿಇ 2009, ದಿನಾಂಕ: 01.08.2009.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 148 ಟಿಪಿಇ 2015, ದಿನಾಂಕ: 23.06.2015.

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಬಿಟಿಇ ಲಿಂಕ್ಸ್ ವೆಬ್‌ಸೈಟ್‌ನಲ್ಲಿ 2018 ರ ನವೆಂಬರ್/ಡಿಸಂಬರ್ ಸೆಮಿಸ್ಟರ್ ಪರೀಕ್ಷೆಗೆ ಕ್ಯಾಂಡಿಡೇಟ್ ಲಿಸ್ಟ್ ಅನ್ನು ಅಪ್‌ಡೇಟ್ ಮಾಡಲು ಅವಕಾಶ ಕಲ್ಪಿಸಲಾಗಿದೆ. ಕ್ಯಾಂಡಿಡೇಟ್ ಲಿಸ್ಟ್‌ನಲ್ಲಿ ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಡೇಟ್ ಮಾಡುವಾಗ ಉಲ್ಲೇಖ (1) ಮತ್ತು (2) ರ ಸರ್ಕಾರಿ ಆದೇಶಗಳನ್ನು ಗಮನದಲ್ಲಿರಿಸಿಕೊಂಡು ಅರ್ಹರಾದ ವಿದ್ಯಾರ್ಥಿಗಳ ವಿವರಗಳನ್ನು ಮಾತ್ರ ಅಪ್‌ಡೇಟ್ ಮಾಡಲು ತಿಳಿಸಲಾಗಿದೆ.

ಅರ್ಹರಲ್ಲದ ವಿದ್ಯಾರ್ಥಿಗಳ ವಿವರಗಳನ್ನು ತಪ್ಪಾಗಿ ಅಪ್‌ಡೇಟ್ ಮಾಡಿ, ಅಂತಹ ವಿದ್ಯಾರ್ಥಿಗಳು 2018ರ ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಅವಕಾಶ ಕಲ್ಪಿಸಿದಲ್ಲಿ, ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಪ್ರಾಚಾರ್ಯರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ತಿಳಿಸಲಾಗಿದೆ ಹಾಗೂ ಸಂಬಂಧಿಸಿದ ಸಂಸ್ಥೆಯ ಪ್ರಾಚಾರ್ಯರುಗಳ ಮೇಲೆ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಲಾಗಿದೆ.

ಆದಕಾರಣ ಅನರ್ಹ ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ 2018 ರ ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗದಂತೆ ಉಲ್ಲೇಖ (1) ಮತ್ತು (2) ರ ಸರ್ಕಾರಿ ಆದೇಶಗಳನ್ವಯ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ : ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮಾಹಿತಿಗಾಗಿ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ : ಇ-ಆಡಳಿತ - ಅಂತರ್ಜಾಲದಲ್ಲಿ ಪ್ರಕಟಿಸಲು.